39

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನ 4ನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಕೃಇ 16 ಕೃವಿಧಾ 2013 ದಿನಾಂಕ: 28-05-2013, 28-08-2013 ಹಾಗೂ 14-11-2013.
2. ಧಾರವಾಡ ಕೃಷಿ ವಿಶ್ವವಿದ್ಯಾಲಯದ ದಿನಾಂಕ: 26-11-2013 ಮತ್ತು 07-01-2014ರ ಪತ್ರ ಸಂಖ್ಯೆ: ಹನಿಅ/ಯೋಜನೇತರಅನು/2013-14/1134-ಸಿ/3143ಏ

ಕೃಷಿ ಆಯುಕ್ತರ ಕಛೇರಿ
3175
03 FEB 2014
ಶೇಷಾದ್ರಿ ರಸ್ತೆ, ಬೆಂಗಳೂರು

**** *** ****

**ಪ್ರಸ್ತಾವನೆ:-**

ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೇತರ ಉದ್ದೇಶಕ್ಕಾಗಿ 2013-14ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ 2415-80-004-2-01 ಸಹಾಯಾನುದಾನ 101 ಅಡಿಯಲ್ಲಿ ರೂ. 5573.00 ಲಕ್ಷಗಳ ಅನುದಾನವನ್ನು ಹಂಚಿಕೆ ಮಾಡಿದ್ದು, ತ್ರೈಮಾಸಿಕ ಕಂತಿನ ರೂಪದಲ್ಲಿ 3ನೇ ತ್ರೈಮಾಸಿಕದಲ್ಲಿ ಮೇಲೆ (1)ರಲ್ಲಿ ಓದಲಾದ ದಿನಾಂಕ: 28-05-2013, 28-08-2013 ಮತ್ತು 14-11-2013ರ ಆದೇಶಗಳಲ್ಲಿ ಕ್ರಮವಾಗಿ ರೂ. 1750.00 + 1036.50 + 1393.25 ಲಕ್ಷಗಳಂತೆ ಒಟ್ಟು ರೂ. 4179.75 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ (2)ರಲ್ಲಿ ಓದಲಾದ ದಿನಾಂಕ: 26-11-2013 ಮತ್ತು 07-01-2014ರ ಪತ್ರಗಳಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಹಣಕಾಸು ನಿಯಂತ್ರಣಾಧಿಕಾರಿಗಳು ಯೋಜನೇತರ ಅನುದಾನದ 4ನೇ ತ್ರೈಮಾಸಿಕ ಕಂತಿನ ಅನುದಾನದ ಬಾಬ್ತು ಒಟ್ಟು ರೂ. 1393.25 ಲಕ್ಷಗಳನ್ನು ಯೋಜನೇತರ ಉದ್ದೇಶಕ್ಕಾಗಿ ಲೆಕ್ಕಶೀರ್ಷಿಕೆ 2415-80-004-2-01 ಸಹಾಯಾನುದಾನ 101 ಅಡಿಯಲ್ಲಿ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೃಇ 16 ಕೃವಿಧಾ 2013, ಬೆಂಗಳೂರು, ದಿನಾಂಕ: 30-01-2014**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ

...2

2013-14ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 2415-80-004-2-01(ಸಹಾಯಾನುದಾನ-101) ಯೋಜನೇತರ ಅಡಿಯಲ್ಲಿ ಹಂಚಿಕೆ ಮಾಡಲಾದ ರೂ. 5573.000 ಲಕ್ಷಗಳಲ್ಲಿ ಬಾಕಿಯಿರುವ ರೂ. 1393.25 ಲಕ್ಷಗಳನ್ನು (ಒಂದು ಸಾವಿರದ ಮೂರು ನೂರ ತೊಂಭತ್ತ ಮೂರು ಲಕ್ಷದ ಇಪ್ಪತ್ತೈದು ಸಾವಿರಗಳು ಮಾತ್ರ) ನಾಲ್ಕನೇ ತ್ರೈಮಾಸಿಕ ಯೋಜನೇತರ ಅನುದಾನವಾಗಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ:-

1. ಪ್ರತಿ ತಿಂಗಳ ಅನುದಾನವನ್ನು ಆಯಾ ತಿಂಗಳ 20ನೇ ತಾರೀಖಿನಂದು ಅಥವಾ 20ನೇ ತಾರೀಖಿನ ನಂತರ ಹಿಂದಿನ ತಿಂಗಳ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು;
2. ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;
3. ಸರ್ಕಾರವು ನೀಡಿದ ಸೂಚನೆ, ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ಯೋಜನೆಯ ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;
4. ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;
5. ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;
6. ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು Regional Joint Director of Collegiate Education, Dharwad, ಇವರಿಗೆ ನೀಡಲಾಗಿದೆ.

3. ಈ ಆದೇಶವನ್ನು ಆರ್ಥಿಕ ಇಲಾಖೆಯ ದಿನಾಂಕ: 16-05-2013ರ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2013ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ್ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಸೇವೆಗಳು)
(ದೂರವಾಣಿ ಸಂಖ್ಯೆ: 080 2203 2344)

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು - ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 15 ಪ್ರತಿಗಳನ್ನು ಒದಗಿಸಲು.

ಪ್ರತಿ:-

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಖೆ) ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ
3. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಜಿಲ್ಲಾ ಖಜಾನಾಧಿಕಾರಿಗಳು, ಧಾರವಾಡ ಜಿಲ್ಲೆ, ಧಾರವಾಡ.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮೇನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
6. ಕುಲಸಚಿವರು/ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ.
7. ಕ್ಷೇತ್ರೀಯ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ.
8. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.